ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ
**ಜೆಎಸ್‌ಎಸ್ ಮಹಾವಿದ್ಯಾಪೀಠ**
ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ವೃತ್ತ, ಮೈಸೂರು 570 004

# ಪ್ರಕಟಣೆಗಾಗಿ

ಶ್ರೀ ಸುತ್ತೂರು ಕ್ಷೇತ್ರದಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠ ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ ವತಿಯಿಂದ ಆಧ್ಯಾತ್ಮಿಕ ಜಿಜ್ಞಾಸುಗಳಿಗೆ ಆಯೋಜಿಸಿರುವ ಅಧ್ಯಯನ ಶಿಬಿರವು ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ಹಾಗೂ ವಿಜಯಪುರದ ಜ್ಞಾನಯೋಗಶ್ರಮದ ನಿರಭಾರಿ ಚರಮೂರ್ತಿಗಳಾದ ಪೂಜ್ಯ ಶ್ರೀ ಸಿದ್ಧೇಶ್ವರ ಮಹಾಸ್ವಾಮಿಗಳವರ ಸಮ್ಮುಖದಲ್ಲಿ ನಡೆಯುತ್ತಿದೆ.

ಎರಡನೆ ದಿನದ ಶಿಬಿರದಲ್ಲಿ 'ಮಹಾಲಿಂಗರಂಗನ ಅನುಭವಾಮೃತ' ಗ್ರಂಥದ ಕುರಿತು ವಿಜಯಪುರ ಜಿಲ್ಲೆಯ ಮಹಾಲಿಂಗಪುರದ ಶ್ರೀ ಸಿದ್ಧಾರೂಢ ಬ್ರಹ್ಮ ವಿದ್ಯಾಶ್ರಮದ ಶ್ರೋ. ಬ್ರ. ಶ್ರೀ ಸಹಜಾನಂದ ಸ್ವಾಮಿಗಳು ತ್ವಂಪದಾರ್ಥ ಶೋಧನೆ ಮತ್ತು ತತ್ವದಾರ್ಥ ಶೋಧನೆ ಎಂಬ ವಿಷಯದ ಮೇಲೆ ಉಪನ್ಯಾಸ ನೀಡಿದರು. ನಂತರ ಘೋಡಗೇರಿಯ ಶ್ರೀ ಶಿವಾನಂದ ಮಠದ ಶ್ರೀ ಕೈವಲ್ಯಾನಂದ ಸ್ವಾಮಿಗಳು ಮಾಯಾ ಮಿಥ್ಯಾತ್ವ ಪ್ರಕರಣ ಕುರಿತು ಉಪನ್ಯಾಸ ನೀಡಿದರು.

ಬೆಳಗಿನ ಪ್ರಾರ್ಥನೆಯೊಂದಿಗೆ ಪ್ರಾರಂಭವಾದ ನಂತರ ಶಿಬಿರಾರ್ಥಿಗಳು ಸ್ವಅಧ್ಯಯನ ಕುರಿತು ಚಿಂತನ–ಮಂಥನ ನಡೆಸಿದರು.

